# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:-** ಅಂಗವಿಕಲತೆಯುಳ್ಳ ರಾಜ್ಯ ಸರ್ಕಾರಿ ನೌಕರರು ಖರೀದಿಸುವ ಯಾಂತ್ರಿಕ ವಾಹನದ ಬೆಲೆಯ ಶೇ.25ರಷ್ಟನ್ನು ಹಿಂಬರಿಸುವ ಬಗ್ಗೆ.

**ಓದಲಾಗಿದೆ:** ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2012 (X) ದಿನಾಂಕ 16.02.2013

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ 16-02-2013ರ ಸರ್ಕಾರಿ ಆದೇಶದಲ್ಲಿ ಅಂಧ ಮತ್ತು ಅಂಗವಿಕಲ ರಾಜ್ಯ ಸರ್ಕಾರಿ ನೌಕರರಿಗೆ ಹಾಲಿ ನೀಡುತ್ತಿರುವ ವಾಹನ ಭತ್ಯೆಯನ್ನು 2012ರ ಪರಿಷ್ಕೃತ ವೇತನ ಶ್ರೇಣಿಯ ಮೂಲ ವೇತನದ ಶೇ.6 ರ ದರದಲ್ಲಿ ತಿಂಗಳಿಗೆ ಯಾವುದೇ ಗರಿಷ್ಠ ಮಿತಿಯಿಲ್ಲದೆ ತಕ್ಷಣದಿಂದ ಜಾರಿಗೆ ಬರುವಂತೆ ಪರಿಷ್ಕರಿಸಿ ಆದೇಶ ಹೊರಡಿಸಲಾಗಿತ್ತು.

2011 ರ ಅಧಿಕಾರಿ ವೇತನ ಸಮಿತಿಯು ಅಂಗವಿಕಲತೆಯುಳ್ಳ ಸರ್ಕಾರಿ ನೌಕರರು ಕಛೇರಿಗೆ ಹೋಗಿ ಬರಲು ಬಳಸುವ ಮೋಟಾರು ಚಾಲಿತ/ಯಾಂತ್ರಿಕ (ಮೆಕಾನಿಕಲ್) ವಾಹನಗಳನ್ನು ಖರೀದಿಸಲು ಸಹಾಯವಾಗಲೆಂದು, ಅಂತಹ ನೌಕರರು ಖರೀದಿಸುವ ವಿಶೇಷ ವಾಹನದ ಬೆಲೆಯ ಶೇಕಡ 25ರಷ್ಟನ್ನು ಗರಿಷ್ಠ ರೂ.25,000/-ಗಳ ಮಿತಿಗೊಳಪಟ್ಟು ಹಿಂಬರಿಸಲು ಮಾಡಿರುವ ಶಿಫಾರಸ್ಸನ್ನು ಸರ್ಕಾರವು ಪರಿಗಣಿಸಿದೆ ಮತ್ತು ಈ ಕೆಳಕಂಡಂತೆ ಆದೇಶಿಸಿದೆ:

## ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2012 (XI)
## ಬೆಂಗಳೂರು, ದಿನಾಂಕ 10ನೇ ಜೂನ್ 2013

ಅಂಗವಿಕಲತೆಯುಳ್ಳ ಸರ್ಕಾರಿ ನೌಕರರು ಕಛೇರಿಗೆ ಹೋಗಿ ಬರಲು ಬಳಸುವ ಮೋಟಾರು ಚಾಲಿತ/ಯಾಂತ್ರಿಕ (ಮೆಕಾನಿಕಲ್) ವಾಹನಗಳನ್ನು ಖರೀದಿಸಲು ಸಹಾಯಧನವಾಗಿ, ವಿಶೇಷ ವಾಹನದ ಬೆಲೆಯ ಶೇಕಡ 25ರಷ್ಟನ್ನು ಗರಿಷ್ಠ ರೂ.25,000/-ಗಳ ಮಿತಿಗೊಳಪಟ್ಟು ಸೇವಾ ಅವಧಿಯಲ್ಲಿ ಒಂದು ಬಾರಿ ಮಾತ್ರ ಹಿಂಬರಿಸಲು ಸರ್ಕಾರವು ಹರ್ಷಿಸುತ್ತದೆ.

2. ಈ ಸೌಲಭ್ಯವು ಶೇ.40 ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಸರ್ಕಾರಿ ನೌಕರರಿಗೆ ಲಭ್ಯವಾಗುತ್ತದೆ. ಅಂಗವಿಕಲತೆಯ ಬಗ್ಗೆ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಸರ್ಕಾರಿ ನೌಕರನು ಇಲಾಖಾ ಮುಖ್ಯಸ್ಥರಿಗೆ ಸಲ್ಲಿಸತಕ್ಕದ್ದು.

3. ಈ ಸೌಲಭ್ಯದ ಮಂಜೂರಾತಿಗಾಗಿ ಸರ್ಕಾರಿ ನೌಕರನು ವಾಹನ ಖರೀದಿಯ ಬಿಲ್ಲನ್ನು ಇಲಾಖಾ ಮುಖ್ಯಸ್ಥರಿಗೆ ಸಲ್ಲಿಸತಕ್ಕದ್ದು.

4. ಈ ಸೌಲಭ್ಯವನ್ನು ಮಂಜೂರು ಮಾಡಲು ನೇಮಕಾತಿ ಪ್ರಾಧಿಕಾರವು ಸಕ್ಷಮ ಪ್ರಾಧಿಕಾರಿಯಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ಎಸ್.ರಾಜಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-2)

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 300 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು
2. ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ಇಲಾಖಾ ಮುಖ್ಯಾಧಿಕಾರಿಗಳು
4. ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ
6. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
9. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
13. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
14. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
17. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
18. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
21. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.kar.nic.in ವೀಕ್ಷಿಸಿ.